# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿಗೆ ಮಂಡಿಸಲಾಗಿರುವ ಟಿಪ್ಪಣಿ

ವಿಷಯ :- ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಯಲಹಂಕ ವಲಯದ ವಾರ್ಡ್ ನಂ:09 ರಲ್ಲಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆರವರಿಗೆ ವಹಿಸಿಕೊಡುವ ಬಗ್ಗೆ.

ಉಲ್ಲೇಖ :- ಮಾನ್ಯ ಆಯುಕ್ತರು ರವರ ಆದೇಶ ಸಂ:ಪಿಎಸ್ಆರ್(ಜಿ)/ 5298 /2019-20, ದಿನಾಂಕ: 6/11/19

*-*-*-*-*-*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯಕ್ಕೆ ಸೇರಿರುವ ವಾರ್ಡ್ ನಂ:09 ಕ್ಕೆ 2019-20ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ ಪಿ-1878 (Bhagyajyothi Sooru / Neeru Yojane and General) ರ ಅಡಿ ಪ್ರಸ್ತಾಪಿತ ಕಾಮಗಾರಿಗಳ ಜಾಬ್ ಕೋಡ್ ಪಡೆದಿದ್ದು, ವಿವರಗಳು ಈ ಕೆಳಕಂಡಂತಿರುತ್ತದೆ.

| SL No | Name of work | Job Code No | Est Cost (Rs. in Lakhs) |
|---|---|---|---|
| 1 | Improvements to roads and drains and other development works in Thindlu colony main roads cross roads and surrounding area in ward no.9 | 009-20-000036 | 98.50 |
| 2 | Construction of RCC drains roads and other development works thindlu colony old village and surrounding area in ward no.9 Vidyaranyapura | 009-20-000037 | 52.0 |

ಈ ಮೇಲ್ಕಾಣಿಸಿದ ಕಾಮಗಾರಿಗಳನ್ನು ಪಾಲಿಕೆಯ ಮುಖ್ಯ ಅಭಿಯಂತರರು (ಯಲಹಂಕ ವಲಯ) ರವರು ಪ್ರಸ್ತಾಪಿತ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ಮುಖಾಂತರ ನಿರ್ವಹಿಸಲು ಅನುಮೋದನೆ ಕೋರಿರುತ್ತಾರೆ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ (ಸಂಗ್ರಹಣ ಕೋಶ) ಆದೇಶ ಸಂಖ್ಯೆ:ಆಇ/541/ವೆಚ್ಚ-12/2019, ದಿನಾಂಕ:29/05/2019 ರಲ್ಲಿ ಸರ್ಕಾರದ ಇಲಾಖೆಗಳು ಮತ್ತು ಇತರೆ ಸಂಗ್ರಹಣಾ ಸಂಸ್ಥೆಗಳು ಕರ್ನಾಟಕ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (ಕೆ.ಆರ್.ಐ.ಡಿ.ಎಲ್) ಸಂಸ್ಥೆಯ ಮೂಲಕ ಗರಿಷ್ಠ ರೂ.2.00 ಕೋಟಿಗಳ ಮಿತಿಯಲ್ಲಿ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ 2019-20ನೇ ಸಾಲಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ. ಈ ವಿಚಾರದಲ್ಲಿ ಮಾನ್ಯ ಆಯುಕ್ತರು ರವರ ಕಛೇರಿ ಟಿಪ್ಪಣಿ ಸಂಖ್ಯೆ:673/2019-20, ದಿನಾಂಕ:10/06/2019 ರಂತೆ ಪಾಲಿಕೆಯ ವತಿಯಿಂದ 2019-20ನೇ ಸಾಲಿನ ಪಾಲಿಕೆಯ ಆಯವ್ಯಯದಲ್ಲಿ ನಿಗಧಿ ಪಡಿಸಿದ ಅನುದಾನದ ಕಾಮಗಾರಿಗಳನ್ನು (ರಾಜ್ಯ ಹಣಕಾಸು ಆಯೋಗದ ಅನುದಾನ, 14ನೇ ಹಣಕಾಸು ಆಯೋಗದ ಅನುದಾನ, ಸ್ವಚ್ ಭಾರತ್ ಮತ್ತು ಘನ ಸರ್ಕಾರದ ಅನುಮೋದಿತ ಕಾಮಗಾರಿಗಳನ್ನು ಹೊರತುಪಡಿಸಿ) ಸಂಬಂಧಪಟ್ಟ ಸ್ಥಾಯಿ ಸಮಿತಿ ಅನುಮೋದನೆ ಪಡೆದು ತದನಂತರ ಸರ್ಕಾರದ ಆರ್ಥಿಕ ಇಲಾಖೆಯವರು ನೀಡಿರುವ ಷರತ್ತುಗಳಿಗೆ ನಿಯಮಾನುಸಾರವಾಗಿ ಕ್ರಮವಹಿಸಿ ಮೆ॥ಕೆ.ಆರ್.ಐ.ಡಿ.ಎಲ್ ಮುಖಾಂತರ ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.

ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಪತ್ರ ಸಂಖ್ಯೆ:ನಅಇ/497/ಎಂ.ಎನ್.ವೈ2016(ಭಾಗ-1), ದಿನಾಂಕ:07/07/2017 ರ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ವತಿಯಿಂದ Performance Security ಪಡೆಯಲು ಸರ್ಕಾರದ ಆದೇಶ ಸಂಖ್ಯೆ:FD/4/PCL/2008, ದಿನಾಂಕ:14/10/2008 ರಂತೆ ಕ್ರಮ ತೆಗೆದುಕೊಳ್ಳಲು ಆದೇಶ ನೀಡಿರುವ ಮೇರೆಗೆ ಮತ್ತು ಈ ವಿಚಾರದಲ್ಲಿ ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರು ಟಿಪ್ಪಣಿ ಸಂಖ್ಯೆ:6282/2018-19, ದಿನಾಂಕ:16/01/2019 ರಲ್ಲಿ ಕಾಮಗಾರಿಗಳಿಗೆ ಕರಾರು ಪತ್ರದಲ್ಲಿ ಅಳವಡಿಸಿಕೊಳ್ಳಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಗಿರುತ್ತದೆ.

.....2/-

ಈ ಹಿನ್ನಲೆಯಲ್ಲಿ, ಮಾನ್ಯ ಆಯುಕ್ತರು ರವರು ಆದೇಶಿಸಿದಂತೆ, ವಾರ್ಡ್ ನಂ:09 ರಲ್ಲಿ ಪ್ರಸ್ತಾಪಿತ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸಿಕೊಡುವ ಬಗ್ಗೆ ಸೂಕ್ತ ನಿರ್ಣಯ ಕೋರಿ ಸಮಿತಿಯ ಮುಂದೆ ಟಿಪ್ಪಣಿ ಮಂಡಿಸಿದೆ.

ಪ್ರಧಾನ ಅಭಿಯಂತರರು (ಪ್ರಭಾರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.